ಆ) ಬಂದಿದ್ದಲ್ಲಿ ಕುಮಟಾ ವಿಧಾನ ಸಭಾ ಕ್ಷೇತ್ರಕ್ಕೆ ಸ್ವಾತಂತ್ರ ಬಂದನಂತರ ಈವರೆಗೂ "ಕೇಂದ್ರ ರಸ್ತೆ ನಿಧಿ" (ಸಿ.ಆರ್.ಎಫ್) ದೊರೆತಿಲ್ಲದಿರುವುದರಿಂದ ಸರ್ಕಾರವು ಸೂಕ್ತ ಕ್ರಮ ಕೈಗೊಳ್ಳುವುದೇ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಕುಮಟಾ ಕ್ಷೇತ್ರದಲ್ಲಿ ಈವರೆಗೂ ಕೇಂದ್ರ ರಸ್ತೆ ನಿಧಿಯಡಿ ಯಾವುದೇ ಕಾಮಗಾರಿಯು ಮಂಜೂರಾಗಿರುವುದಿಲ್ಲ. ಕೇಂದ್ರ ರಸ್ತೆ ನಿಧಿಯಡಿ ಅನುದಾನ ಲಭ್ಯತೆಗೆ ಅನುಗುಣವಾಗಿ ಪ್ರಸ್ತಾವನೆಗಳನ್ನು ಜನಪ್ರತಿನಿಧಿಗಳಿಂದ ಬಂದ ಬೇಡಿಕೆಗಳನ್ನು ಆಧರಿಸಿ ಪ್ರಸ್ತಾವನೆಗಳು ನಿಯಮಾನುಸಾರ ಇದ್ದಲ್ಲಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುತ್ತಿದೆ. ಹಂತ ಹಂತವಾಗಿ ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲೂ ಕಾಮಗಾರಿಗಳನ್ನು ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಆ) ಎಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲೂ ಕೇಂದ್ರ ರಸ್ತೆ ನಿಧಿಯಡಿ ಕಾಮಗಾರಿಗಳನ್ನು ಕೈಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಲೋಕೋಪಯೋಗಿ ಮತ್ತು ಜಿಲ್ಲಾ ಪರಿಷತ್ ಇಂಜಿನಿಯರಿಂಗ್ ವಿಭಾಗದಲ್ಲಿ "ವಿಶೇಷ ದುರಸ್ತಿ ನಿಧಿ"

2478 (3088) : ಶ್ರೀ ಮೋಹನ್ ಕೆ. ಶೆಟ್ಟಿ (ಕುಮಟ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಲೋಕೋಪಯೋಗಿ ಇಲಾಖೆಯಲ್ಲಿ ಮತ್ತು ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ಇಲಾಖೆಯಲ್ಲಿ "ವಿಶೇಷ ದುರಸ್ತಿ ನಿಧಿ" ಯು (ಎಸ್.ಆರ್. ಫಂಡ್) ಎಲ್ಲಾ ವಿಧಾನ ಸಭಾ ಕ್ಷೇತ್ರಗಳಿಗೂ ಅಗತ್ಯಕ್ಕನುಗುಣವಾಗಿ ಹಂಚಿಕೆಯಾಗದೆ ದುಂದು ವೆಚ್ಚ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದರೆ, ಅಗತ್ಯತೆಗೆ ಅನುಗುಣವಾಗಿ ಎಲ್ಲಾ ಕ್ಷೇತ್ರಗಳಿಗೂ ಸರಿಯಾಗಿ ಹಣ ಹಂಚಿಕೆ ಮಾಡಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ಲೋಕೋಪಯೋಗಿ ಇಲಾಖೆಯಲ್ಲಿ ಯಾವುದೇ ದುಂದು ವೆಚ್ಚ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಅಗತ್ಯವಿರುವ ಕ್ಷೇತ್ರಗಳಿಗೆ ಲೆಕ್ಕ ಶೀರ್ಷಿಕೆ 3054 ರಸ್ತೆ ಮತ್ತು ಸೇತುವೆ (ಯೋಜನೇತರ) ಅಡಿಯಲ್ಲಿ ರಸ್ತೆಗಳ ದುರಸ್ತಿಗೆ ಒದಗಿಸುವ ಅನುದಾನದಿಂದ ದುರಸ್ತಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

ಕರಾವಳಿ ಮತ್ತು ಘಟ್ಟದ ಮೇಲಿನ ಭಾಗವನ್ನು 2 ಜಿಲ್ಲೆಗಳನ್ನಾಗಿ ವಿಭಜಿಸುವುದು

2479 (3089) : ಶ್ರೀ ಮೋಹನ್ ಕೆ. ಶೆಟ್ಟಿ (ಕುಮಟ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯು ಭೌಗೋಳಿಕವಾಗಿ ಬಹಳ ವಿಸ್ತೀರ್ಣವಾಗಿದ್ದು, ವಿಶಾಲವಾದ ಕರಾವಳಿ ಭಾಗವನ್ನು ಮತ್ತು ವಿಶಾಲವಾದ ಘಟ್ಟದ ಮೇಲಿನ ಭಾಗವನ್ನು ಹೊಂದಿದ್ದು, ಇದನ್ನು